ಆ) ಬಾಗೇಪಲ್ಲಿ ವಿಧಾನಸಭಾ ಕ್ಷೇತ್ರದ ಗುಡಿಬಂಡೆ ಪಟ್ಟಣ ಪಂಚಾಯಿತಿ ಮತ್ತು ಬಾಗೇಪಲ್ಲಿ ಪುರ ಸಭೆಗಳಲ್ಲಿ ಒಳಚರಂಡಿ ವ್ಯವಸ್ಥೆ ಇಲ್ಲದೇ ಸಾರ್ವಜನಿಕರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಹೌದು

ಇ) ಹಾಗಿದ್ದಲ್ಲಿ, ಅದಕ್ಕಾಗಿ ತೆಗೆದುಕೊಂಡ ಕ್ರಮಗಳೇನು?

ಗುಡಿಬಂಡೆ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ರೂ.1215.00 ಲಕ್ಷ ರೂ.ಗಳನ್ನು ಒಳಚರಂಡಿ ವ್ಯವಸ್ಥೆಗೆ ರೂ.1001.03 ರೂ.ಗಳನ್ನು ರಸ್ತೆ ಮತ್ತು ಚರಂಡಿ ನಿರ್ಮಾಣಕ್ಕಾಗಿ ಯುಐಡಿಎಸ್ಎಸ್ಎಂಟಿ ಯೋಜನೆ ಯಡಿಯಲ್ಲಿ ಕ್ರಿಯಾ ಯೋಜನೆಯನ್ನು ಕೇಂದ್ರ ಸರ್ಕಾರದ ತಾಂತ್ರಿಕ ಸಂಸ್ಥೆಗಳ ಪರಿಶೀಲನಾ ಪ್ರಕ್ರಿಯೆಗಳ ಒಳಪಟ್ಟು ತಾಂತ್ರಿಕವಾಗಿ ಅನುಮೋದಿಸಲಾಗಿರುತ್ತದೆ.

240 ಶ್ರೀ ಸಂಪಂಗಿ.ಎನ್.(ಬಾಗೇಪಲ್ಲಿ)

ಮಾನ್ಯ ಮುಖ್ಯಮಂತ್ರಿಗಳು

ಅ) ಕೆ.ಸಿ.ರೆಡ್ಡಿಯವರು ರಾಜ್ಯದ ಪ್ರಥಮ ಮುಖ್ಯಮಂತ್ರಿಗಳಾಗಿದ್ದು ಹಾಗೂ ವಿಧಾನಸೌಧಕ್ಕೆ ಕಟ್ಟಡ ಕಟ್ಟಲು ಅಡಿಗಲ್ಲು ಹಾಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ದಿನಾಂಕ 13.07.1951 ರಂದು ಅಂದಿನ ಪ್ರಧಾನ ಮಂತ್ರಿಗಳಾಗಿದ್ದ ಶ್ರೀ ಜವಾಹರಲಾಲ್ ನೆಹರುರವರು ವಿಧಾನಸೌಧ ಕಟ್ಟಡದ ಅಡಿಗಲ್ಲು ಹಾಕಿರುತ್ತಾರೆ.

ಆ) ಬಂದಿದ್ದಲ್ಲಿ ಅವರ ಪುತ್ಥಳಿಯನ್ನು ವಿಧಾನಸೌಧದ ಮುಂದೆ ಸ್ಥಾಪಿಸಲು ಉದ್ದೇಶಿಸಲಾಗಿದೆಯೇ?

ದಿವಂಗತ ನೇತಾಜಿ ಸುಭಾಶ್ ಚಂದ್ರ ಬೋಸ್ ಹಾಗೂ ಎಸ್.ನಿಜಲಿಂಗಪ್ಪ ರವರುಗಳ ಸ್ಮಾರಕಗಳನ್ನು ವಿಧಾನಸೌಧದ - ಅಸುಪಾಸಿನಲ್ಲಿ ಸ್ಥಾಪಿಸುವುದಕ್ಕೆ ಸಂಬಂಧಿಸಿದಂತೆ ಉಚ್ಚ ನ್ಯಾಯಾಲಯದಲ್ಲಿ ದಾಖಲಾಗಿದ್ದ ಪ್ರಕರಣದಲ್ಲಿ ವಿಧಾನಸೌಧದ ಸುತ್ತಮುತ್ತ ಈ ರೀತಿಯ ಪ್ರತಿಮೆ, ಪುತ್ಥಳಿ ಇತ್ಯಾದಿಗಳನ್ನು ಸ್ಥಾಪಿಸದಂತೆ ನಿರ್ಬಂಧಗಳನ್ನು ವಿಧಿಸಿ ರಾಜ್ಯ ಉಚ್ಚ ನ್ಯಾಯಾಲಯವು 2001ನೇ ಸಾಲಿನಲ್ಲಿ ತೀರ್ಪು ನೀಡಿರುತ್ತದೆ. ಈ ಕಾರಣದಿಂದಾಗಿ ಪ್ರತಿಮೆ ಸ್ಥಾಪನೆ ಪ್ರಶ್ನೆ ಉದ್ಭವಿಸುವುದಿಲ್ಲ